# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 707 |
| ಸದಸ್ಯರ ಹೆಸರು | ಶ್ರೀ ಚಿದಾನಂದ್ ಎಂ.ಗೌಡ |
| ಉತ್ತರಿಸುವ ದಿನಾಂಕ | 12.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿರಾ ತಾಲ್ಲೂಕು ಚಿಕ್ಕನಹಳ್ಳಿಯ ದಾನಿ ಶ್ರೀ ಉಗ್ರೇಗೌಡರು ತುಮಕೂರು ಜಿಲ್ಲಾ ಖಜಾನೆಯಲ್ಲಿ ಮಹಾರಾಜರ ಸರ್ಕಾರದ ಆದೇಶ ಸಂಖ್ಯೆ:2440-2MUZ 675-09-04, ದಿನಾಂಕ:-24.03.1911 ರಲ್ಲಿ ರೂ.24,000/-ಗಳ ಮೂಲಧನವನ್ನು ಸರ್ಕಾರದಲ್ಲಿ ಠೇವಣಿ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಉದ್ದೇಶಕ್ಕಾಗಿ ಈ ಠೇವಣೆಯನ್ನು ಇಡಲಾಗಿದೆ; | ಶಿರಾ ತಾಲ್ಲೂಕು ಚಿಕ್ಕನಹಳ್ಳಿಯ ದಾನಿ ಶ್ರೀ ಉಗ್ರೇಗೌಡರು ತುಮಕೂರು ಜಿಲ್ಲಾ ಖಜಾನೆಯಲ್ಲಿ ಮಹಾರಾಜರ ಸರ್ಕಾರದ ಆದೇಶ ಸಂಖ್ಯೆ:2440-2 24.03.1911 ರಲ್ಲಿ ಠೇವಣಿ ಇಟ್ಟಿರುವ ಬಗ್ಗೆ ಶಿರಾ ತಾಲ್ಲೂಕು ಕಛೇರಿ/ತುಮಕೂರು ಜಿಲ್ಲಾ ಖಜಾನೆಯಲ್ಲಿ<br>ದಾಖಲಾತಿ ಲಭ್ಯವಿರುವುದಿಲ್ಲ ಎಂದು ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರು ಮಾಹಿತಿ ಸಲ್ಲಿಸಿರುತ್ತಾರೆ. |
| ಆ) | 1910 ರಿಂದ ಇಲ್ಲಿಯವರೆವಿಗೂ ಯಾವ ಯಾವ ಸಾಲಿನಲ್ಲಿ ಈ ಠೇವಣಿ ಹಣದ ಒಟ್ಟು ಬಡ್ಡಿ ಹಣವನ್ನು ಯಾವ ಇಲಾಖೆಯವರು ಯಾವ ಉದ್ದೇಶಕ್ಕೆ ವಿನಿಯೋಗಿಸಿರುತ್ತಾರೆ;(ಸಂಪೂರ್ಣ ಮಾಹಿತಿ ನೀಡುವುದು); | ಉಂಬಳಿಗಳ ಮೇಲಿನ ಬಡ್ಡಿ ಉದ್ದೇಶಕ್ಕಾಗಿ ಲೆಕ್ಕ ಶೀರ್ಷಿಕೆ: 2049-03-107-1-00(240ಸಿ) ಇದರಡಿ ಆರ್ಥಿಕ ಇಲಾಖೆಯಿಂದ ಮಂಜೂರಾಗಿ ಬಿಡುಗಡೆಯಾಗುತ್ತಿದ್ದ<br>ಅನುದಾನವನ್ನು ಅಧೀನ ಕಛೇರಿಗಳು/ಇತರೆ ಇಲಾಖೆಗಳಿಗೆ ಬೇಡಿಕೆ ಪ್ರಸ್ತಾವನೆಯನ್ವಯ ಸಂಬಂಧಪಟ್ಟ ಸಂಸ್ಥೆಗಳಿಗೆ ಪಾವತಿ ಮಾಡುವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗುತ್ತಿತ್ತು.<br><br>ಸದರಿ ಲೆಕ್ಕ ಶೀರ್ಷಿಕೆಯಡಿ 2015-16ನೇ ಸಾಲಿನಿಂದ ಬೇಡಿಕೆಗನುಗುಣವಾಗಿ ಆರ್ಥಿಕ ಇಲಾಖೆಯಿಂದ ಅನುದಾನ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಬಿಡುಗಡೆಯಾಗದೆ ಇದ್ದು, ಠೇವಣಿ ಇರಿಸಿರುವ ಬಗ್ಗೆ ದಾಖಲೆ/ಬಾಂಡ್‌ಗಳನ್ನು ಒದಗಿಸುವಂತೆ ಆರ್ಥಿಕ ಇಲಾಖೆಯಿಂದ ಸೂಚಿಸಿದ್ದು, ಅದರನ್ವಯ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಕಛೇರಿ/ ಸಾರ್ವಜನಿಕ ಶಿಕ್ಷಣ ಇಲಾಖೆ/ಸೈನಿಕ ಕಲ್ಯಾಣ ಮತ್ತು ಪುನರ್ ವಸತಿ ಇಲಾಖೆಗಳಿಗೆ ಪತ್ರ ಬರೆದು ಅಗತ್ಯವಿರುವ ಮಾಹಿತಿ/ದಾಖಲೆಗಳನ್ನು ಒದಗಿಸಲು ಕೋರಲಾಗಿರುತ್ತದೆ.<br><br>2014-15ನೇ ಸಾಲಿನವರೆವಿಗೂ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಯಾವ ಉದ್ದೇಶಕ್ಕೆ / ಯಾವ ಸಂಸ್ಥೆಗಳಿಗೆ ವಿನಿಯೋಗ ಮಾಡಿಕೊಳ್ಳಲಾಗಿದೆ ಎಂಬ ಬಗ್ಗೆ ವಿವರಗಳನ್ನು ಒದಗಿಸುವಂತೆ ಕೋರಿ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಹಾಗೂ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಪತ್ರ ಬರೆಯಲಾಗಿರುತ್ತದೆ. |
| ಇ) | ಇನ್ನು ಮುಂದಾದರೂ ಸರ್ಕಾರದ ಆದೇಶ ಸಂಖ್ಯೆ:-6436-50A&I 195-15-02 ದಿನಾಂಕ:-06.09.1916 ರಂತೆ ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿ ಈ ಠೇವಣಿ ಹಣದ ಬಡ್ಡಿಯನ್ನು ಶ್ರೀ ಉಗ್ರೇಗೌಡರ ಮೂಲ ಉದ್ದೇಶದಂತೆ ಚಿಕ್ಕನಹಳ್ಳಿಯ ಸರ್ಕಾರಿ ಶ್ರೀ ಕೃಷ್ಣರಾಜೇಂದ್ರ ವ್ಯವಸಾಯ ಧರ್ಮ ಪಾಠಶಾಲೆಯ (ಎಸ್.ಕೆ.ವಿ.ಡಿ) ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ವಿನಿಯೋಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಠೇವಣಿ ಮಾಡಿರುವ ಬಗ್ಗೆ ದಾಖಲಾತಿಗಳನ್ನು ಸಂಬಂಧಪಟ್ಟ ಸಂಸ್ಥೆ/ ಆಯಾಯ ಇಲಾಖೆ/ಅಧೀನ ಕಛೇರಿಯಿಂದ ಸಲ್ಲಿಸಿದ್ದಲ್ಲಿ, ನಿಯಮಾನುಸಾರ ಪರಿಶೀಲಿಸಿ ಬಡ್ಡಿ ಹಣವನ್ನು ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 49 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು